# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ: ತುವಿ:ಡಿಇವಿ-2023-24 | 3464 ದಿನಾಂಕ:19.12.2023

## ಸುತ್ತೋಲೆ

ವಿಷಯ: ತುಮಕೂರು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಕಾಲೇಜುಗಳ ವತಿಯಿಂದ ವಿದ್ಯಾರ್ಥಿಗಳನ್ನು ನಿಯೋಜಿಸುವ ಕುರಿತು.

ಉಲ್ಲೇಖ:1.ಅಧ್ಯಕ್ಷರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ತುಮಕೂರು ಇವರ ಪತ್ರ ದಿನಾಂಕ:16.12.2023

2.ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:19.12.2023

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ತುಮಕೂರು ಇವರ ವತಿಯಿಂದ ದಿನಾಂಕ:29 ಮತ್ತು 30 ಡಿಸೆಂಬರ್ 2023 ರಂದು ಆಯೋಜಿಸುತ್ತಿರುವ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಕಾರ್ಯಕ್ರಮ ಆಯೋಜನೆಗೆ ಸಂಬಂಧ ತಮ್ಮ ಕಾಲೇಜುಗಳಿಂದ ಎನ್‌ಸಿಸಿ, ಎನ್‌ಎಸ್‌ಎಸ್ ಮತ್ತು ಐಚ್ಚಿಕ ಕನ್ನಡ ಭಾಷೆ ವಿಷಯವನ್ನು ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳನ್ನು ಕಡ್ಡಾಯವಾಗಿ ಹಾಗೂ ಇತರೆ ವಿಷಯಗಳ ಆಸಕ್ತ ವಿಧ್ಯಾರ್ಥಿಗಳನ್ನು ನಿಯೋಜಿಸಲು ಈ ಮೂಲಕ ಸೂಚಿಸಲಾಗಿದೆ.

ಈ ಸಂಬಂಧ ತಮ್ಮ ಕಾಲೇಜಿನ ವತಿಯಿಂದ ಒಬ್ಬ ಬೋಧಕ ಸಿಬ್ಬಂದಿಯನ್ನು ಕನ್ನಡ ಸಾಹಿತ್ಯ ಸಮ್ಮೇಳನದ ನೋಡಲ್ ಅಧಿಕಾರಿಯಾಗಿ ನೇಮಿಸಿ ಸದರಿಯವರ ಹೆಸರು, ಪದನಾಮ, ದೂರವಾಣಿ ಸಂಖ್ಯೆ ವಿವರಗಳನ್ನು ಹಾಗೂ ಸಮ್ಮೇಳನದಲ್ಲಿ ಭಾಗವಹಿಸುವ ವಿದ್ಯಾರ್ಥಿಗಳ ಪಟ್ಟಿಯನ್ನು ವಿಶ್ವವಿದ್ಯಾನಿಲಯದ ಡಾ.ನಾಗಭೂಷಣ, ನೋಡಲ್ ಅಧಿಕಾರಿಗಳು, ಕನ್ನಡ ಸಾಹಿತ್ಯ ಸಮ್ಮೇಳನ ಹಾಗೂ ಸಹಾಯಕ ಪ್ರಾಧ್ಯಾಪಕರು, ಕನ್ನಡ ವಿಭಾಗ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು ಇವರಿಗೆ ದಿನಾಂಕ:22.12.2023 ರೊಳಗಾಗಿ ಮಾಹಿತಿಯನ್ನು ನೀಡಲು ಈ ಮೂಲಕ ಸೂಚಿಸಲಾಗಿದೆ.

ಆದೇಶದ ಮೇರೆಗೆ

ಕುಲಸಚಿವರು

ಕುಲಸಚಿವರು

ತುಮಕೂರು ವಿಶ್ವವಿದ್ಯಾನಿಲಯ

ಗೆ,

1. ಎಲ್ಲಾ ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ/ನಗರದ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಡಾ. ನಾಗಭೂಷಣ, ನೋಡಲ್ ಅಧಿಕಾರಿಗಳು, ಕನ್ನಡ ಸಾಹಿತ್ಯ ಸಮ್ಮೇಳನ ಹಾಗೂ ಸಹಾಯಕ ಪ್ರಾಧ್ಯಾಪಕರು, ಕನ್ನಡ ವಿಭಾಗ, ವಿಶ್ವವಿದ್ಯಾನಿಲಯ ವಿಜ್ಞಾನ ಕಾಲೇಜು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1.ಅಧ್ಯಕ್ಷರು, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ತುಮಕೂರು ಜಿಲ್ಲೆ, ತುಮಕೂರು.

2.ಮಾನ್ಯ ಕುಲಪತಿಯವರ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

3.ಕಚೇರಿ ಪ್ರತಿ.